
# ಕಾಲೇಜು ಸಹಾಯಕ ಪ್ರಾಧ್ಯಾಪಕರ ನೇಮಕಾತಿ ವಯೋಮಿತಿ ಹೆಚ್ಚಳಕ್ಕೆ ಹೊರಟ್ಟಿ ಮನವಿ

ಬೆಂಗಳೂರು, ಅ.5: ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ವಯೋಮಿತಿಯನ್ನು ಎರಡು ವರ್ಷ ಹೆಚ್ಚಿಸುವಂತೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿದ್ದಾರೆ.



ಈ ಕುರಿತು ಮುಖ್ಯಮಂತ್ರಿಗಳಿಗೆ ಪತ್ರ ಬರೆದಿರುವ ಅವರು ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಸರಕಾರ ನೇಮಕಾತಿಗೆ ಅಧಿಸೂಚನೆ ಹೊರಡಿಸಿದೆ. ಅಧಿಸೂಚನೆಯಲ್ಲಿ ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕದೊಳಗಾಗಿ ಈ ಹಿಂದೆ ಸರಕಾರ ನಿಗದಿಪಡಿಸಿದ್ದ ಸಾಮಾನ್ಯ ವರ್ಗ- 40 ವರ್ಷ, ಇತರೆ ಹಿಂದುಳಿದ ವರ್ಗ-43 ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 45 ವರ್ಷದ ವಯೋಮಿತಿಯೊಳಗೆ ಇರಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಆದರೆ ಕಳೆದ ಎರಡು ವರ್ಷಗಳಿಂದ ಇಡೀ ಜಗತ್ತನ್ನು ಆವರಿಸಿರುವ ಮಹಾಮಾರಿ ಕೊರೋನಾ ನಾಗರೀಕರ ಜನಜೀವನ ಅಸ್ತವ್ಯಸ್ತಗೊಳಿಸಿದೆ. ಅಲ್ಲದೇ ಕಳೆದ ಎರಡು ವರ್ಷಗಳಿಂದ ಕೋವಿಡ್ ಮಹಾಮಾರಿ ಕಾರಣದಿಂದ ಸರಕಾರ ಯಾವುದೇ ನೇಮಕಾತಿಗಳನ್ನು ಮಾಡಿರುವುದಿಲ್ಲ. ಇದರಿಂದ ಹಲವಾರು ಜನ ಪ್ರಾಧ್ಯಾಪಕರ ಹುದ್ದೆಯ ವಯೋಮಿತಿ ಮೀರಿದ್ದಾರೆ. ಆದ್ದರಿಂದ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ನೇಮಕಾತಿ ವಯೋಮಿತಿಯನ್ನು ಹೆಚ್ಚಿಸಿದಂತೆ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ವಯೋಮಿತಿಯನ್ನು ಸಹ ಹೆಚ್ಚಿಸುವಂತೆ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ಮುಖ್ಯಮಂತ್ರಿಗಳಿಗೆ ವಿಶೇಷ ಮನವಿ ಮಾಡಿದ್ದಾರೆ.

ಕೋವಿಡ್ ಮಹಾಮಾರಿ ರೋಗದ ಕಾರಣ ವಿಶ್ವವಿದ್ಯಾಲಯ ಧನ ಸಹಾಯ ಆಯೋಗದವರೂ (ಯು.ಜಿ.ಸಿ.) ಸಹ ಪ್ರಾಧ್ಯಾಪಕರ ಹುದ್ದೆಗೆ ಇರುವ ಡಾಕ್ಟರೇಟ್ ಪದವಿಯನ್ನು ಪಡೆಯಬೇಕೆಂಬ ಶರತ್ತನ್ನು ಎರಡು ವರ್ಷಗಳ ಮಟ್ಟಿಗೆ ರಿಯಾಯತಿ ನೀಡಿ ಆದೇಶಿಸಿದ್ದಾರೆ. ಈಗ ಸಹಾಯಕ ಪ್ರಾಧ್ಯಾಪಕರ ಹುದ್ದೆಯ ವಯೋಮಿತಿ ಸಡಿಲಿಕೆ ಮಾಡದಿದ್ದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಲು ವಯೋಮಿತಿ ಮೀರುತ್ತಿರುವ ಹಲವಾರು ಅಭ್ಯರ್ಥಿಗಳು ವಂಚಿತರಾಗುತ್ತಿದ್ದಾರೆ. (2ನೇ ಪುಟಕ್ಕೆ)

Dehlivarthe 06.11.2021

1ನೇ ಪುಟದಿಂದ

# ನೇಮಕಾತಿ ವಯೋಮಿತಿ ಹೆಚ್ಚಳಕ್ಕೆ ಹೊರಟ್ಟಿ ಮನವಿ

ಆದ್ದರಿಂದ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನಿಗದಿಪಡಿಸಿರುವ ವಯೋಮಿತಿಯನ್ನು ಎರಡು ವರ್ಷಗಳ ಸಡಿಲಿಕೆ ಮಾಡಬೇಕೆಂದು ಸಭಾಪತಿ ಬಸವರಾಜ ಹೊರಟ್ಟಿಯವರು ಮಾನ್ಯ ಮುಖ್ಯಮಂತ್ರಿಗಳಿಗೆ ಹಾಗೂ ಉನ್ನತ ಶಿಕ್ಷಣ ಸಚಿವರಿಗೆ ಪತ್ರ ಬರೆದು ಕೂಡಲೇ ವಯೋಮಿತಿ ಸಡಿಲಿಕೆಯ ಕುರಿತ ಅಧಿಸೂಚನೆಯನ್ನು ಶೀಘ್ರವೇ ಹೊರಡಿಸಿ ಸಹಸ್ರಾರು ನಿರುದ್ಯೋಗಿ ಯುವಜನರಿಗೆ ನ್ಯಾಯ ಒದಗಿಸುವಂತೆ ಕೋರಿದ್ದಾರೆ.